**All India Radio: Bangalore**
**National Bulletin In Kannada**
**12.07.2025 1.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**12.07.2025 1.10 p.m.**

**<><><><>**

ಮುಖ್ಯಾಂಶಗಳು

1. ೫೧ ಸಾವಿರಕ್ಕೂ ಹೆಚ್ಚು ಯುವ ಉದ್ಯೋಗಿಗಳಿಗೆ ನೇಮಕ ಪತ್ರ ವಿತರಿಸಿದ ಪ್ರಧಾನಿ ನರೇಂದ್ರ ಮೋದಿ
2. ಯುನೆಸ್ಕೋ ವಿಶ್ವ ಪಾರಂಪರಿಕ ಪಟ್ಟಿಯಲ್ಲಿ ಸ್ಥಾನ ಪಡೆದ ೧೨ ಐತಿಹಾಸಿಕ ಮರಾಠಾ ಕೋಟೆಗಳು
3. ಮೇಘಾಲಯದಲ್ಲಿ ಒಂದು ಸಾವಿರದ ೮೭ ಕೋಟಿ ರೂಪಾಯಿ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್ ಶಂಕುಸ್ಥಾಪನೆ
4. ಹಾಕಿ ಇಂಡಿಯಾ ಸಬ್ ಜೂನಿಯರ್ ಮಹಿಳಾ ರಾಷ್ಟ್ರೀಯ ಚಾಂಪಿಯನ್‌ಶಿಪ್: ಸೆಮಿಫೈನಲ್‌ನಲ್ಲಿಂದು ಹರಿಯಾಣ-ಒಡಿಶಾ, ಜಾರ್ಖಂಡ್-ಮಿಜೋರಾಂ ಮುಖಾಮುಖಿ

<><><><>

ಯುವಜನರನ್ನು ಸಬಲೀಕರಣಗೊಳಿಸುವ ಮತ್ತು ವಿಕಸಿತ ಭಾರತವನ್ನು ನಿರ್ಮಿಸುವಲ್ಲಿ ಕೇಂದ್ರ ಸರ್ಕಾರದ ಬದ್ಧತೆಯನ್ನು ಉದ್ಯೋಗ ಮೇಳ ಪ್ರತಿಬಿಂಬಿಸುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ವಿವಿಧ ಸರ್ಕಾರಿ ಇಲಾಖೆಗಳು ಮತ್ತು ಸಂಸ್ಥೆಗಳಲ್ಲಿ ಹೊಸದಾಗಿ ನೇಮಕಗೊಂಡ ಯುವ ಉದ್ಯೋಗಿಗಳಿಗೆ ವಿಡಿಯೋ ಕಾನ್ಫರೆನ್ಸ್ ಮೂಲಕ ೫೧ ಸಾವಿರಕ್ಕೂ ಹೆಚ್ಚು ನೇಮಕಾತಿ ಪತ್ರಗಳನ್ನು ವಿತರಿಸಿ ಅವರು ಮಾತನಾಡಿದರು. ಜನಸಂಖ್ಯೆ ಮತ್ತು ಪ್ರಜಾಪ್ರಭುತ್ವವು ಭಾರತದ ಎರಡು ಅಪರಿಮಿತ ಶಕ್ತಿಗಳಾಗಿವೆ. ಇದನ್ನು ಜಗತ್ತು ಕೂಡ ಒಪ್ಪಿಕೊಂಡಿದೆ. ಉದ್ಯೋಗ ಮೇಳದಿಂದ ಈಗಾಗಲೇ ಲಕ್ಷಾಂತರ ಯುವಕರು ಕೇಂದ್ರ ಸರ್ಕಾರದಲ್ಲಿ ಉದ್ಯೋಗಗಳನ್ನು ಪಡೆದುಕೊಂಡಿದ್ದಾರೆ. ಈ ಯುವಕರು ರಾಷ್ಟ್ರ ನಿರ್ಮಾಣದಲ್ಲಿ ಪ್ರಮುಖ ಪಾತ್ರ ವಹಿಸಲಿದ್ದಾರೆ ಎಂದರು. ದೇಶದಲ್ಲಿ ಅಭಿವೃದ್ಧಿಪಡಿಸಲಾಗುತ್ತಿರುವ ನವೋದ್ಯಮಗಳು, ನಾವೀನ್ಯತೆ ಮತ್ತು ಸಂಶೋಧನೆಯ ಪರಿಸರ

ವ್ಯವಸ್ಥೆಯು ದೇಶದ ಯುವಕರ ಸಾಮರ್ಥ್ಯವನ್ನು ಹೆಚ್ಚಿಸಿವೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

*** ಧ್ವನಿ *** ಪ್ರಧಾನಿ(೩೦ ಸೆಕೆಂಡ್ಸ್)

ದೇಶಾದ್ಯಂತ ಆಯ್ಕೆಯಾದ ಅಭ್ಯರ್ಥಿಗಳು ರೈಲ್ವೆ, ಗೃಹ ವ್ಯವಹಾರಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ, ಕಾರ್ಮಿಕ ಮತ್ತು ಉದ್ಯೋಗ ಹಾಗೂ ಅಂಚೆ ಇಲಾಖೆ ಸೇರಿದಂತೆ ಇತರೆ ಇಲಾಖೆಗಳು ಮತ್ತು ಸಚಿವಾಲಯಗಳಲ್ಲಿ ಕಾರ್ಯ ನಿರ್ವಹಿಸುತ್ತಿದ್ದಾರೆ. ದೇಶಾದ್ಯಂತ ಉದ್ಯೋಗ ಮೇಳಗಳ ಮೂಲಕ ಇಲ್ಲಿಯವರೆಗೆ ಹತ್ತು ಲಕ್ಷಕ್ಕೂ ಹೆಚ್ಚು ನೇಮಕಾತಿ ಪತ್ರಗಳನ್ನು ನೀಡಲಾಗಿದೆ.

<><><><>

೨೦೨೪-೨೫ನೇ ಸಾಲಿನ ಯುನೆಸ್ಕೋ ವಿಶ್ವ ಪಾರಂಪರಿಕ ಪಟ್ಟಿ ಘೋಷಣೆ ಆಗಿದ್ದು, ಇದರಲ್ಲಿ ಮರಾಠಾ ಸೇನಾ ಭೂದೃಶ್ಯಗಳು ಎಂದೇ ಖ್ಯಾತಿ ಪಡೆದಿರುವ ೧೨ ಐತಿಹಾಸಿಕ ಮರಾಠಾ ಕೋಟೆಗಳು ಸ್ಥಾನ ಪಡೆದುಕೊಂಡಿವೆ. ಮಹಾರಾಷ್ಟ್ರದಲ್ಲಿರುವ ೧೧ ಮತ್ತು ತಮಿಳುನಾಡಿನಲ್ಲಿರುವ ಒಂದು ಕೋಟೆ ಇದರಲ್ಲಿ ಸೇರಿವೆ. ಮಹಾರಾಷ್ಟ್ರದ ಸಲ್ಹೇರ್ ಕೋಟೆ, ಶಿವನೇರಿ ಕೋಟೆ, ಲೋಹಗಡ, ರಾಯಗಡ, ರಾಜ್‌ಗಡ, ಪ್ರತಾಪಗಡ, ಸುವರ್ಣದುರ್ಗ, ಪನ್ಹಾಲಾ ಕೋಟೆ, ವಿಜಯದುರ್ಗ, ಖಂಡೇರಿ ಕೋಟೆ ಮತ್ತು ಸಿಂಧುದುರ್ಗ ಹಾಗೂ ತಮಿಳುನಾಡಿನ ಜಿಂಗಿಕೋಟೆ ಸೇರಿವೆ. ೧೭ ಮತ್ತು ೧೯ನೇ ಶತಮಾನಗಳ ನಡುವೆ ಅಭಿವೃದ್ಧಿಪಡಿಸಲಾದ ಈ ಕೋಟೆಗಳು ಐತಿಹಾಸಿಕ ಪ್ರವಾಸಿ ತಾಣಗಳಾಗಿವೆ. ಒಂದು ಕಾಲದಲ್ಲಿ ಭಾರತೀಯ ಉಪಖಂಡದ ದೊಡ್ಡ ಭಾಗ ಆಳಿದ ಮರಾಠಾ ಸಾಮ್ರಾಜ್ಯದ ಕಾರ್ಯತಂತ್ರದ ಜಾಣ್ಮೆಯನ್ನು ಇವು ಪ್ರತಿಬಿಂಬಿಸುತ್ತವೆ. ಈ ಐತಿಹಾಸಿಕ ಮೈಲಿಗಲ್ಲನ್ನು ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಸಂಸ್ಕೃತಿ ಸಚಿವ ಗಜೇಂದ್ರ ಸಿಂಗ್ ಶೇಖಾವತ್, ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಶ್ಲಾಘಿಸಿದ್ದು, ಈ ಸಾಧನೆಗಾಗಿ ಭಾರತೀಯರನ್ನು ಅಭಿನಂದಿಸಿದ್ದಾರೆ.

<><><><>

ಮೇಘಾಲಯದಲ್ಲಿ ಒಂದು ಸಾವಿರದ ೮೭ ಕೋಟಿ ರೂಪಾಯಿ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಶಂಕುಸ್ಥಾಪನೆ ಮತ್ತು ಉದ್ಘಾಟನೆ ನೆರವೇರಿಸಿದರು. ಶಿಲ್ಲಾಂಗ್‌ನಲ್ಲಿರುವ ಅಂತಾರಾಷ್ಟ್ರೀಯ ಪ್ರದರ್ಶನ ಕಲೆಗಳು ಮತ್ತು ಸಂಸ್ಕೃತಿ ಕೇಂದ್ರದಲ್ಲಿ ನಡೆದ ಸಾರ್ವಜನಿಕ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಅವರು,

ಬಂಡವಾಳ ಹೂಡಿಕೆಗಾಗಿ ರಾಜ್ಯಗಳಿಗೆ ವಿಶೇಷ ಸಹಾಯದ ಅಡಿಯಲ್ಲಿ ಹಂಚಿಕೆಯಾದ ೫ ಸಾವಿರದ ೪೦೦ ಕೋಟಿ ರೂಪಾಯಿಗಳನ್ನು ಮೇಘಾಲಯವು ಸಂಪೂರ್ಣವಾಗಿ ಬಳಸಿಕೊಂಡಿದೆ ಎಂದು ಹೇಳಿದರು. ಈಶಾನ್ಯ ರಾಜ್ಯಗಳ ಸಮಗ್ರ ಅಭಿವೃದ್ಧಿಗಾಗಿ ಕೇಂದ್ರ ಸರ್ಕಾರ ಗಮನಹರಿಸಿದೆ. ಮೇಘಾಲಯದಲ್ಲಿ ೫೪೦ ಕಿಲೋಮೀಟರ್‌ಗೂ ಹೆಚ್ಚು ರಸ್ತೆಗಳನ್ನು ನಿರ್ಮಿಸಲಾಗಿದೆ. ಜಲಜೀವನ್ ಮಿಷನ್, ಪ್ರಧಾನಮಂತ್ರಿ ಆವಾಸ್ ಯೋಜನೆ, ಪಿಎಂ-ಜೀವನ್ ಜ್ಯೋತಿ ಬಿಮಾ ಯೋಜನೆ, ಸ್ವಚ್ಛ ಭಾರತ್ ಸೇರಿದಂತೆ ಇತರೆ ಯೋಜನೆಗಳನ್ನು ಮೇಘಾಲಯ ಪೂರ್ಣ ಪ್ರಮಾಣದಲ್ಲಿ ಅನುಷ್ಠಾನಗೊಳಿಸಿದೆ ಎಂದು ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್ ತಿಳಿಸಿದರು.

<><><>

ಎಲ್ಲಾ ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಹ್ಯಾಂಡ್‌ಬಾಲ್ ಪಂದ್ಯಾವಳಿಗಳನ್ನು ಆಯೋಜಿಸಲು ಮತ್ತು ಪ್ರಸಾರ ಮಾಡಲು ಮೂರು ವರ್ಷಗಳ ತಿಳಿವಳಿಕೆ ಒಪ್ಪಂದಕ್ಕೆ ಪ್ರಸಾರ ಭಾರತಿ ಮತ್ತು ಭಾರತೀಯ ಹ್ಯಾಂಡ್‌ಬಾಲ್ ಸಂಸ್ಥೆ ಸಹಿ ಹಾಕಿವೆ. ಈ ಪಂದ್ಯಾವಳಿಗಳು ಡಿಡಿ ಸ್ಪೋರ್ಟ್ಸ್, ವೇವ್ಸ್ ಒಟಿಟಿ ಮತ್ತು ಪ್ರಸಾರ ಭಾರತಿಯ ಇತರೆ ವಾಹಿನಿಗಳಲ್ಲಿ ಪ್ರಸಾರವಾಗಲಿದೆ. ಪ್ರಸಾರ ಭಾರತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗೌರವ್ ದ್ವಿವೇದಿ ಮತ್ತು ಭಾರತೀಯ ಹ್ಯಾಂಡ್‌ಬಾಲ್ ಸಂಸ್ಥೆಯ ಕಾರ್ಯನಿರ್ವಾಹಕ ನಿರ್ದೇಶಕ ಆನಂದೇಶ್ವರ ಪಾಂಡೆ ಒಪ್ಪಂದವನ್ನು ಔಪಚಾರಿಕವಾಗಿ ವಿನಿಮಯ ಮಾಡಿಕೊಂಡರು. ಈ ಸಂದರ್ಭದಲ್ಲಿ ಪ್ರಸಾರ ಭಾರತಿ ಅಧ್ಯಕ್ಷ ನವನೀತ್ ಕುಮಾರ್ ಸೆಹಗಲ್ ಉಪಸ್ಥಿತರಿದ್ದರು.

<><><>

ಕೇರಳದ ತಿರುವನಂತಪುರದಲ್ಲಿಂದು ಬಿಜೆಪಿಯ ನೂತನ ರಾಜ್ಯ ಕಚೇರಿ ಕಟ್ಟಡವನ್ನು ಕೇಂದ್ರ ಗೃಹ ಸಚಿವ ಮತ್ತು ಬಿಜೆಪಿ ಹಿರಿಯ ನಾಯಕ ಅಮಿತ್ ಶಾ ಉದ್ಘಾಟಿಸಿದರು. ಇದೇ ವೇಳೆ ನೂತನ ಕಟ್ಟಡ ಸಭಾಂಗಣದಲ್ಲಿ ಬಿಜೆಪಿಯ ಮಾಜಿ ರಾಜ್ಯಾಧ್ಯಕ್ಷ ಕೆ.ಜಿ.ಮಾರಾರ್ ಅವರ ಕಂಚಿನ ಪ್ರತಿಮೆಯನ್ನು ಅವರು ಅನಾವರಣಗೊಳಿಸಿದರು. ಈ ವೇಳೆ ಬಿಜೆಪಿ ರಾಜ್ಯಾಧ್ಯಕ್ಷ ರಾಜೀವ್ ಚಂದ್ರಶೇಖರ್ ಸೇರಿದಂತೆ ಬಿಜೆಪಿ ಹಿರಿಯ ನಾಯಕರು ಉಪಸ್ಥಿತರಿದ್ದರು.

<><><>

ಪ್ರವಾಹಪೀಡಿತ ಟೆಕ್ಸಾಸ್‌ಗೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತು ಅವರ ಪತ್ನಿ ಮೆಲಾನಿಯಾ ಟ್ರಂಪ್ ಭೇಟಿ ನೀಡಿ, ಪರಿಶೀಲನೆ ನಡೆಸಿದ್ದಾರೆ. ಟೆಕ್ಸಾಸ್ ಪ್ರವಾಹದಲ್ಲಿ ಇದುವರೆಗೂ ೩೭ ಮಕ್ಕಳು

ಸೇರಿದಂತೆ ಕನಿಷ್ಠ ೧೨೦ ನಾಗರಿಕರು ಅಸುನೀಗಿದ್ದು, ೧೬೦ಕ್ಕೂ ಹೆಚ್ಚು ಜನರು ನಾಪತ್ತೆಯಾಗಿದ್ದಾರೆ. ಸಂತ್ರಸ್ತ ಕುಟುಂಬಗಳು, ರಕ್ಷಣಾ ಕಾರ್ಯಕರ್ತರು ಮತ್ತು ಕರಾವಳಿ ಕಾವಲು ಪಡೆಯ ಸಿಬ್ಬಂದಿಯೊಂದಿಗೆ ಅಮೆರಿಕ ಅಧ್ಯಕ್ಷರು ಸಂವಾದ ನಡೆಸಿದರು. ತೀವ್ರ ಹಾನಿಗೊಳಗಾದ ಕೆರ್ವಿಲ್ಲೆಯ ಪ್ರವಾಹಪೀಡಿತ ಪ್ರದೇಶಗಳನ್ನು ಅಮೆರಿಕ ಸರ್ಕಾರದಿಂದ ಪುನರ್ ನಿರ್ಮಿಸುವುದಾಗಿ ಅಲ್ಲಿನ ನಿವಾಸಿಗಳಿಗೆ ಡೊನಾಲ್ಡ್ ಟ್ರಂಪ್ ಭರವಸೆ ನೀಡಿದರು. ನಾಪತ್ತೆಯಾಗಿರುವ ನಾಗರಿಕರನ್ನು ಹುಡುಕಲು ೧೨ ಸಾವಿರದ ೩೦೦ಕ್ಕೂ ಹೆಚ್ಚು ಸ್ವಯಂ ಸೇವಕರು ದಿನದ ಹತ್ತು ಗಂಟೆಗಳ ಕಾಲ ಶೋಧ ಕಾರ್ಯದಲ್ಲಿ ನಿರತರಾಗಿದ್ದಾರೆ ಎಂದು ಇದೇ ವೇಳೆ ಅಧಿಕಾರಿಗಳು ಮಾಹಿತಿ ನೀಡಿದರು.

<><><><>

ಜಾರ್ಖಂಡ್‌ನ ರಾಂಚಿಯಲ್ಲಿ ನಡೆದ ೧೫ನೇ ಹಾಕಿ ಇಂಡಿಯಾ ಸಬ್ ಜೂನಿಯರ್ ಮಹಿಳಾ ರಾಷ್ಟ್ರೀಯ ಚಾಂಪಿಯನ್‌ಶಿಪ್‌ನ ಕ್ವಾರ್ಟರ್-ಫೈನಲ್ ಪಂದ್ಯಗಳಲ್ಲಿ ಅಮೋಘ ಪ್ರದರ್ಶನ ನೀಡಿದ ನಂತರ ಹರಿಯಾಣ, ಒಡಿಶಾ, ಮಿಜೋರಾಂ ಮತ್ತು ಜಾರ್ಖಂಡ್ ತಂಡಗಳು ಸೆಮಿಫೈನಲ್‌ಗೆ ಲಗ್ಗೆ ಇಟ್ಟಿವೆ. ಸೆಮಿಫೈನಲ್‌ನಲ್ಲಿ ಇಂದು ಹರಿಯಾಣ, ಒಡಿಶಾವನ್ನು ಎದುರಿಸಲಿದೆ ಮತ್ತು ಜಾರ್ಖಂಡ್ ವಿರುದ್ಧ ಮಿಜೋರಾಂ ಸೆಣಸಲಿದೆ.

<><><><>

ಲಂಡನ್‌ನ ಸೆಂಟರ್ ಕೋರ್ಟ್‌ನಲ್ಲಿ ಇಂದು ರಾತ್ರಿ ನಡೆಯಲಿರುವ ವಿಂಬಲ್ಡನ್ ಗ್ರ್ಯಾನ್ ಸ್ಲ್ಯಾಮ್ ಟೆನಿಸ್ ಪಂದ್ಯಾವಳಿಯ ಮಹಿಳಾ ಸಿಂಗಲ್ಸ್ ವಿಭಾಗದ ಫೈನಲ್‌ನಲ್ಲಿ ಐದು ಬಾರಿಯ ಗ್ರ್ಯಾಂಡ್ ಸ್ಲಾಂ ಚಾಂಪಿಯನ್ ಪೋಲ್ಯಾಂಡ್‌ನ ಇಗಾ ಸ್ವಿಯಾಟೆಕ್ ಹಾಗೂ ೧೩ನೇ ಶ್ರೇಯಾಂಕಿತ ಅಮೆರಿಕದ ಅಮಾಂಡಾ ಅನಿಸಿಮೋವಾ ಪ್ರಶಸ್ತಿಗಾಗಿ ಸೆಣಸಾಟ ನಡೆಸಲಿದ್ದಾರೆ. ಈ ಪಂದ್ಯ ಭಾರತೀಯ ಕಾಲಮಾನ ರಾತ್ರಿ ೮:೩೦ಕ್ಕೆ ಆರಂಭವಾಗಲಿದೆ. ಪುರುಷರ ಸಿಂಗಲ್ಸ್ ವಿಭಾಗದ ಫೈನಲ್ ಪಂದ್ಯದ ನಾಳೆ ನಡೆಯಲಿದ್ದು, ವಿಶ್ವ ಅಗ್ರ ಶ್ರೇಯಾಂಕಿತ ಜಾನಿಕ್ ಸಿನ್ನರ್, ಎರಡನೇ ಶ್ರೇಯಾಂಕಿತ ಸ್ಪೇನ್‌ನ ಕಾರ್ಲೋಸ್ ಆಲ್ಕಾರಾಸ್ ವಿರುದ್ಧ ಪ್ರಶಸ್ತಿಗಾಗಿ ಸೆಣಸಾಟ ನಡೆಸಲಿದ್ದಾರೆ.

<><><><>

ಲಂಡನ್‌ನ ಲಾರ್ಡ್ಸ್ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಆಂಡರ್ಸನ್-ತೆಂಡೂಲ್ಕರ್ ಟ್ರೋಫಿಯ ಮೂರನೇ ಟೆಸ್ಟ್ ಪಂದ್ಯದ ಮೂರನೇ ದಿನದಾಟದಲ್ಲಿಂದು ಭಾರತ ತನ್ನ ಮೊದಲ ಇನಿಂಗ್ಸ್ ಮುಂದುವರಿಸಲಿದೆ. ಇಂದಿನ ದಿನದಾಟ ಅಪರಾಹ್ನ ೩.೩೦ ಕ್ಕೆ ಆರಂಭವಾಗಲಿದೆ. ನಿನ್ನೆ ಜಸ್ಪ್ರೀತ್

ಬೂಮ್ರಾ ಅವರ ೫ ವಿಕೆಟ್ ಗೊಂಚಲಿನ ಸಹಾಯದೊಂದಿಗೆ ಇಂಗ್ಲೆಂಡ್ ತಂಡವನ್ನು ೩೮೭ ರನ್ ಗಳಿಗೆ ಸೀಮಿತಗೊಳಿಸಿದ ಬಳಿಕ, ತನ್ನ ಮೊದಲನೇ ಇನ್ನಿಂಗ್ಸ್‌ನಲ್ಲಿ ಭಾರತ, ದಿನದ ಅಂತ್ಯಕ್ಕೆ ೩ ವಿಕೆಟ್ ನಷ್ಟಕ್ಕೆ ೧೪೫ ರನ್ ಗಳಿಸಿದೆ.  ಅರ್ಧ ಶತಕ ಗಳಿಸಿರುವ ಕೆ.ಎಲ್.ರಾಹುಲ್ ಹಾಗೂ ೧೯ ರನ್ ಗಳಿಸಿರುವ ರಿಷಬ್ ಪಂತ್ ಕಣದಲ್ಲಿದ್ದಾರೆ.

<><><><>

ಇಟಲಿ ಕ್ರಿಕೆಟ್ ತಂಡವು ಮೊದಲ ಬಾರಿಗೆ ಐಸಿಸಿ ಪುರುಷರ ಟಿ-೨೦ ವಿಶ್ವಕಪ್‌ಗೆ ಅರ್ಹತೆ ಗಿಟ್ಟಿಸಿಕೊಂಡಿದೆ. ಇಟಲಿಯ ಜೊತೆಗೆ ನೆದರ್‌ಲ್ಯಾಂಡ್ಸ್ ಕೂಡ ಮುಂದಿನ ವರ್ಷದ ಭಾರತ ಮತ್ತು ಶ್ರೀಲಂಕಾ ಆತಿಥ್ಯದಲ್ಲಿ ನಡೆಯಲಿರುವ ಪಂದ್ಯಾವಳಿಗೆ ಅರ್ಹತೆ ಪಡೆದಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>